For more job news visit : www.kpscvaani.com

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಹಾನಗರ ಪಾಲಿಕೆ ಕಛೇರಿಗಳು, ನರಸಿಂಹರಾಜ ಚೌಕ, ಬೆಂಗಳೂರು-560002

ಅಧಿಸೂಚನೆ ಸಂಖ್ಯೆ: ಸ.ಆ.ನೇ&ವಿ/ಪಿಆರ್/46/2023-24 ದಿನಾಂಕ:14-03-2024

ಅಧಿಸೂಚನೆ

ಪೌರಕಾರ್ಮಿಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಬಗ್ಗೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಘನತ್ಯಾಜ್ಯ ನಿರ್ವಹಣೆ ಹಾಗೂ ವಿವಿಧ ಸ್ವಚ್ಛತಾ ಕಾರ್ಯಗಳ ನಿರ್ವಹಣೆಗಾಗಿ ಘನತ್ಯಾಜ್ಯ ನಿರ್ವಹಣೆ ವಿಭಾಗದಲ್ಲಿ ನೇರಪಾವತಿಯಡಿ (DPS) ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಭರ್ತಿಗಾಗಿ ಸೃಜಿಸಿರುವ 11,307 ಸಂಖ್ಯಾತಿರಿಕ್ತ (Supernumerary posts) ಹುದ್ದೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಇ), ದಿನಾಂಕ: 02-03-2023, ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಭಾ-1), ದಿನಾಂಕ: 28-03-2023 ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಭಾ-1), ದಿನಾಂಕ: 04-03-2024 ರ ಅನ್ವಯ ಭರ್ತಿ ಮಾಡುವ ಸಲುವಾಗಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಡಿಯಲ್ಲಿನ ತ್ಯಾಜ್ಯ ನಿರ್ವಹಣೆ ಕಾರ್ಯಗಳಲ್ಲಿ ಹಾಲಿ ನೇರಪಾವತಿ ಅಥವಾ ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ (ಪೌರಕಾರ್ಮಿಕರು) ಆಧಾರದ ಮೇಲೆ ಕನಿಷ್ಠ 02 ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ, ಸೇವೆಯನ್ನು ಸಲ್ಲಿಸಿರುವ ಹಾಗೂ ಸದರಿ ನಿಯಮಗಳು ಜಾರಿಗೆ ಬಂದ ದಿನಾಂಕದಿಂದ (ಅಂದರೆ ದಿನಾಂಕ: 02-03-2023) ಕಾರ್ಯ ನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕ್ರಮ ಸಂಖ್ಯೆ	ಇಲಾಖೆ ಮತ್ತು ಹುದ್ದೆಯ ಪದನಾಮ	ಸ್ಥಳೀಯ ವೃಂದದ – ಹುದ್ದೆಗಳು (KK) ಕಲ್ಯಾಣ-ಕರ್ನಾಟಕ
01	ಬಿಬಿಎಂಪಿಯಲ್ಲಿ ನೇರಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ 'ಡಿ' ಗ್ರೂಪ್ ಪೌರಕಾರ್ಮಿಕರು	905

ಸ್ಥಳೀಯ ಮೂಲ ವೃಂದದ ವರ್ಗೀಕೃತ ಮೀಸಲಾತಿ ಹುದ್ದೆಗಳು.

ಕ್ರ.ಸ	ಹುದ್ದೆಯ ಹೆಸರು	ಹುದ್ದೆಗಳ ಸಂಖ್ಯೆ	ವರ್ಗೀಕರಣ								
				ಪ.ಜಾ (17%)	ಪ.ಪಂ (7%)	ಪ್ರ-1 (4%)	ಪ್ರ 2ಎ (15%)	ಪ್ರ 2ಬಿ (4%)	ಪ್ರ 3ಎ (4%)	ಪ್ರ 3ಬಿ (5%)	ಸಾ.ಅ (44%)	ಒಟ್ಟು
01	ಪೌರಕಾರ್ಮಿಕರು (17000-28950)	905	ಇತರೆ	24	10	5	21	5	5	7	63	140
			ಮಹಿಳೆ	51	21	12	45	12	12	15	132	300
			ಗ್ರಾಮೀಣ	39	16	10	34	10	10	11	100	230
			ಅಂಗವಿಕಲ	8	4	2	7	2	2	3	20	48
			ತೃ.ಲಿಂಗ	2	1	1	2	1	1	1	4	13
			ಮಾ.ಸೈ	15	6	3	13	3	3	4	39	86
			ಕ.ಮಾ.ಅ	8	3	2	7	2	2	2	20	46
			ಯೋ.ನಿರಾ	7	3	2	6	1	1	2	20	42
			ಒಟ್ಟು	154	64	37	135	36	36	45	398	905

For more job news visit : www.kpscvaani.com

- ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 15-03-2024 (ಬೆಳಗ್ಗೆ 10:00 ಗಂಟೆಗೆ)
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15-04-2024(ಸಂಜೆ 5:30 ಗಂಟೆಯೊಳಗೆ)
- ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸುವಂತಿಲ್ಲ.
- ಅಭ್ಯರ್ಥಿಗಳು ಆರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು/ಓದಿಸಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಪಾಲಿಕೆಯು ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
- ಅಭ್ಯರ್ಥಿಯು ಅರ್ಜಿಯನ್ನು ಸಂಬಂಧಪಟ್ಟ ಪಾಲಿಕೆಯ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು(ಘನತ್ಯಾಜ್ಯ ನಿರ್ವಹಣೆ) ಕಛೇರಿಯಲ್ಲಿ ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 5:30 ಗಂಟೆಯೊಳಗೆ ಸಲ್ಲಿಸತಕ್ಕದ್ದು(ಸಾರ್ವತ್ರಿಕ ರಜೆಯ ದಿನ ಹೊರತುಪಡಿಸಿ).

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

ಸಾ.ಅ	ಸಾಮಾನ್ಯ ಅಭ್ಯರ್ಥಿ	GM	General Merit
ಪ.ಜಾ	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	CAT-1	Category - 1
2ಎ	ಪ್ರವರ್ಗ-2ಎ	2A	Category - 2A
2ಬಿ	ಪ್ರವರ್ಗ-2ಬಿ	2B	Category - 2B
3ಎ	ಪ್ರವರ್ಗ-3ಎ	3A	Category - 3A
3ಬಿ	ಪ್ರವರ್ಗ-3ಬಿ	3B	Category - 3B
ಮಾ.ಸೈ	ಮಾಜಿ ಸೈನಿಕ	EX -MP	Ex -Military Person
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Candidate
ಅಂ.ವಿ	ಅಂಗವಿಕಲ	PH	Person with bench mark disability
ಯೋ.ನಿರಾ.ಅ	ಯೋಜನೆಯಿಂದ ನಿರಾಶ್ರಿತ ಅಭ್ಯರ್ಥಿ	PDP	Project Displaced Person
ಉ.ಮೂ.ವೃ	ಉಳಿಕೆ ಮೂಲ ವೃಂದ	RPC	Residual Parent Cadre
ಕೆ.ಕೆ	ಕಲ್ಯಾಣ-ಕರ್ನಾಟಕ	KK	Kalyana Karnataka
ತೃ.ಲಿಂಗ	ತೃತೀಯ ಲಿಂಗಗಳು	TG	Transgender

ವಿಶೇಷ ಸೂಚನೆ:

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳುವುದು.
- ಪಾಲಿಕೆಯ ಆಯಾ ವಾರ್ಡಗೆ ಸಂಬಂಧಿಸಿದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಂದ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅದೇ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಮಾತ್ರ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬೇಕು.

For more job news visit : www.kpscvaani.com

1. ನೇಮಕಾತಿ ಷರತ್ತುಗಳು

ಎ) ಅರ್ಹತಾ ಷರತ್ತುಗಳು:-

1. ಭಾರತೀಯ ನಾಗರೀಕನಾಗಿರತಕ್ಕದ್ದು.
2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನೇರಪಾವತಿಯಡಿ (DPS) ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಭರ್ತಿಗಾಗಿ ಸೃಜಿಸಿರುವ 11,307 ಸಂಖ್ಯಾತಿರಿಕ್ತ (Supernumerary posts) ಹುದ್ದೆಗಳನ್ನು ಸರ್ಕಾರದ ಆದೇಶ ಜಾರಿಗೆ ಬಂದ ದಿನಾಂಕದಿಂದ (ಅಂದರೆ 02-03-2023 ರಿಂದ) ಗರಿಷ್ಠ ವಯೋಮಿತಿ 55 ವರ್ಷಗಳು ಮೀರತಕ್ಕದ್ದಲ್ಲ.
3. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ/ ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದಲ್ಲಿ ಎರಡು ವರ್ಷಗಳು ಕಡಿಮೆ ಇಲ್ಲದಂತೆ, ನಿರಂತರವಾಗಿ, ಕೆಲಸ ನಿರ್ವಹಿಸಿರುವ ಹಾಗೂ ಎರಡು ವರ್ಷಗಳಿಗೂ ಮೇಲ್ಪಟ್ಟು ಪಾಲಿಕೆಯಿಂದ ವೇತನ ಪಡೆದ ದಾಖಲಾತಿಗಳನ್ನು ನೇಮಕಾತಿಗೆ ಆದ್ಯತೆ ನೀಡಲಾಗುವುದು.
4. ದೈಹಿಕ ದೃಢತೆ ಇರತಕ್ಕದ್ದು (ಸರ್ಕಾರಿ ಆಸ್ಪತ್ರೆಯ ಸಕ್ಷಮ ಪ್ರಾಧಿಕಾರದಿಂದ ವೈದ್ಯಕೀಯ ಪ್ರಮಾಣ ಪತ್ರ ಪಡೆಯತಕ್ಕದ್ದು) (ವಿಕಲ ಚೇತನರಿಗೆ (PH) ಹೊರತುಪಡಿಸಿ).
5. ಕನ್ನಡ ಭಾಷೆ ಮಾತನಾಡಲು ತಿಳಿದಿರಬೇಕು.
6. ಈ ಹುದ್ದೆಗೆ ಯಾವುದೇ ಶೈಕ್ಷಣಿಕ ವಿದ್ಯಾರ್ಹತೆ ಅಗತ್ಯವಿರುವುದಿಲ್ಲ.

ಬಿ) ಅನರ್ಹತೆ ಷರತ್ತುಗಳು :-

1. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.
2. ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.
3. ಈಗಾಗಲೇ ಗಂಭೀರ ಪ್ರಕರಣದ ಕಾರಣ ಸೇವೆಯಿಂದ ತೆಗೆದುಹಾಕಿರಬಾರದು.

2. ನೇಮಕಾತಿ ವಿಧಾನ:-

1. ನೇಮಕಾತಿಗೆ ಅರ್ಹರಾಗುವ ಅಭ್ಯರ್ಥಿಗಳ ಅರ್ಹತೆಗೆ ಅನುಗುಣವಾಗಿ ಅಂದರೆ ನೇರಪಾವತಿ / ಕ್ಷೇಮಾಭಿವೃದ್ಧಿ / ದಿನಗೂಲಿ ಆಧಾರದ ಮೇಲೆ ಸಲ್ಲಿಸಿದ ಸೇವಾವಧಿಯನ್ನು ಪರಿಗಣಿಸಿ ಚಾಲ್ತಿಯಲ್ಲಿರುವ ಮೀಸಲಾತಿ ನೀತಿಗೊಳಪಟ್ಟು ಅರ್ಹತೆ ಪಟ್ಟಿಯನ್ನು ತಯಾರಿಸಲಾಗುವುದು.
2. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಪೈಕಿ ಎರಡು ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಬೇಕು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು.
3. ಸಮತಳ ಮೀಸಲಾತಿಯಡಿ ಕನ್ನಡ ಮಾಧ್ಯಮ, ಗ್ರಾಮೀಣ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆಂದು ಮೀಸಲಾದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ, ಉಳಿದ ಅರ್ಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.
4. ಅರ್ಹ ಸಾಮಾನ್ಯ ವರ್ಗ, ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.
5. ನೇರಪಾವತಿಯಡಿ (DPS) ಎರಡು ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಿ ಪರಿಗಣಿಸಲಾಗುವುದು.
6. ಮೇಲಿನ ಮಾನದಂಡಗಳನ್ವಯ ಅರ್ಹ ಅಭ್ಯರ್ಥಿಗಳ ಮುಖ್ಯ ಪಟ್ಟಿಯನ್ನು ತಯಾರಿಸಲಾಗುವುದು.
7. ಅರ್ಹ ಅಭ್ಯರ್ಥಿಗಳ ಅಂತಿಮ ಮುಖ್ಯ ಪಟ್ಟಿಯನ್ನು ಪಾಲಿಕೆಯ ಮುಖ್ಯ ಆಯುಕ್ತರ ಕಛೇರಿಯ ಸೂಚನಾ ಫಲಕದಲ್ಲಿ, ಎಲ್ಲಾ ವಲಯ ಕಛೇರಿಗಳಲ್ಲಿ ಹಾಗೂ ಪಾಲಿಕೆಯ ಜಾಲತಾಣದಲ್ಲಿ (WEBSITE) ಪ್ರಕಟಿಸಲಾಗುವುದು.
8. ಆಯ್ಕೆಯಾಗಿರುವ ಅಭ್ಯರ್ಥಿಗೆ ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಆದೇ ಪ್ರವರ್ಗದ ಮೀಸಲಾತಿಯ ಹೆಚ್ಚುವರಿ ಪಟ್ಟಿಯಲ್ಲಿರುವ ಮತ್ತೊಬ್ಬ ಅಭ್ಯರ್ಥಿಯನ್ನು ನೇಮಕಾತಿಗಾಗಿ ಪರಿಗಣಿಸಲು ಕ್ರಮವಹಿಸಲಾಗುವುದು.

For more job news visit : www.kpscvaani.com

2. ಜನ್ಮ ದಿನಾಂಕ ದಾಖಲಾತಿಗೆ ಸಂಬಂಧಿಸಿದಂತೆ:–

ಅಭ್ಯರ್ಥಿಗಳ ಭವಿಷ್ಯ ನಿಧಿ ಖಾತೆಯಲ್ಲಿ ನಮೂದಿಸಲಾದ ಜನ್ಮ ದಿನಾಂಕದ ದಾಖಲಾತಿಗಳನ್ನು ಪರಿಗಣಿಸಲಾಗುವುದು.

3. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:–

(ಅ) ಶೈಕ್ಷಣಿಕ ವಿದ್ಯಾರ್ಹತೆ ನಿಗಧಿ ಪಡಿಸಿರುವುದಿಲ್ಲ.
(ಆ) ಕನ್ನಡ ಭಾಷೆ ಮಾತನಾಡಲು ತಿಳಿದಿರಬೇಕು.
(ಇ) ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ. (ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಭವಿಷ್ಯನಿಧಿಯಲ್ಲಿ ದಾಖಲಾದ ಮಾಹಿತಿಯಂತೆ ಅಥವಾ ಅಭ್ಯರ್ಥಿಗಳ ಶೈಕ್ಷಣಿಕ ದಾಖಲಾತಿಗಳನ್ನು ಪರಿಗಣಿಸಲಾಗುವುದು).

5. ಮೀಸಲಾತಿ ಪ್ರಮಾಣ ಪತ್ರಗಳು:

ಜಾತಿ ಮೀಸಲಾತಿ ಕೋರಬಯಸುವವರು

(ಅ) ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ

(ಆ) ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ ಹಾಗೂ

(ಇ) 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಹುದ್ದೆಗಳಿಗಾಗಿ ಆಯ್ಕೆ ಹೊಂದುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಜಾತಿ ಮೀಸಲಾತಿ ಪ್ರಮಾಣ ಪತ್ರಗಳನ್ನು ಆಯಾ ನೇಮಕಾತಿ ಪ್ರಾಧಿಕಾರದವರು ಅವುಗಳ ಸಿಂಧುತ್ವದ ಪರಿಶೀಲನೆಗೆ ಒಳಪಟ್ಟಂತೆ ನೇಮಕಾತಿಗೆ ಬದ್ಧರಾಗಿರುತ್ತಾರೆ. ಅಧಿಸೂಚನೆಯ ಕೊನೆಯಲ್ಲಿ ಪ್ರಮಾಣ ಪತ್ರಗಳ ನಮೂನೆಯನ್ನು ನೀಡಲಾಗಿರುತ್ತದೆ.

6.ಮಾಜಿ ಸೈನಿಕ:

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್ಆರ್ಆರ್ 92 ದಿನಾಂಕ01–04–1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್ಆರ್ಆರ್ 95 ದಿನಾಂಕ 21–10–1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್, ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

For more job news visit : www.kpscvaani.com

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

1.ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು
2.ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3.ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

7.ಗ್ರಾಮೀಣ ಅಭ್ಯರ್ಥಿ

ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ) ನಿಗಧಿತ ನಮೂನೆ-2 ರಲ್ಲಿ ಪ್ರಮಾಣ ಪತ್ರವನ್ನು ಪಡೆದು ಲಗತ್ತಿಸಿರಬೇಕು.

8. ಕನ್ನಡ ಮಾಧ್ಯಮ ಅಭ್ಯರ್ಥಿ

ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ್ದಲ್ಲಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ) ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಲಗತ್ತಿಸಿರಬೇಕು.

9. ಅಂಗವಿಕಲ/ವಿಕಲಚೇತನ ಅಭ್ಯರ್ಥಿಗಳು:

<u>ಅಂಗವಿಕಲ ಅಭ್ಯರ್ಥಿ ಎಂದರೆ:</u>

(ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿಉತ್ತಮವಾದ ಕಣ್ಣಿನಲ್ಲಿ 6:60 ದೃಷ್ಟಿ ಸಾಮಾರ್ಥ್ಯ ಇರುವ ವ್ಯಕ್ತಿ.

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಈ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರಿಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಉ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಊ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

(ಋ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜ್‌ನ್) ರಿಂದ ದೈಹಿಕ ಅಂಗವಿಕಲತೆಯ ಮೌಲಿಕರಣವನ್ನು ಅಲ್ಮಿಕೊ ಕಾನ್‌ಪುರ್ (ಡಬ್ಲ್ಯೂ.ಎಚ್.ಒ.ಸ್ಟ್ಯಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

<u>ಸರ್ಕಾರದ ಆದೇಶ ಸಂಖ್ಯೆ:</u> ಸಿಆಸುಇ 115 ಸೆನೆನಿ 2005 ದಿ:19-11-2005 ರಲ್ಲಿ ನಿಗಧಿಪಡಿಸಿರುವ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಸರ್ಕಾರದ ಆದೇಶ ಸಂಖ್ಯೆ:WCD 118 PHP 2020, Bengaluru, dt:13-01-2022 ರಂತೆ ಅಂಗವಿಕಲ ಅಭ್ಯರ್ಥಿಗಳಿಗೆ ಪಾಲಿಕೆಯಲ್ಲಿ ಹುದ್ದೆಗಳನ್ನು

For more job news visit : www.kpscvaani.com

ಭರ್ತಿ ಮಾಡುವಾಗ ನಿಗಧಿಪಡಿಸಿರುವಂತೆ ಪರಿಗಣಿಸಲಾಗುವುದು. ಅನ್ವಯವಾಗುವ ಅಂಗವಿಕಲ/ವಿಕಲಚೇತನ ಪ್ರಮಾಣ ಪತ್ರದ ಪ್ರತಿಯನ್ನು ಅಥವಾ UDID ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಲಗತ್ತಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

10. ತೃತೀಯ ಲಿಂಗಗಳ ಮೀಸಲಾತಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸೇನೆನಿ 2020 ದಿನಾಂಕ: 14-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ 'ಎ' 'ಬಿ' 'ಸಿ' ಹಾಗೂ 'ಡಿ' ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1(ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗಧಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಲಗತ್ತಿಸಬೇಕು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

11. ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಗಳು

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಶೇ.5% ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99 ದಿನಾಂಕ: 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಅಂದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

12. ಅನುಚ್ಛೇದ 371(ಜೆ)ರನ್ವಯ ಕಲ್ಯಾಣ-ಕರ್ನಾಟಕ (KK) ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ (ಕಲ್ಯಾಣ-ಕರ್ನಾಟಕ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013, ದಿನಾಂಕ:29-01-2014ರ ಅನುಬಂಧ-ಎ ರಲ್ಲಿ (3)(3)ನೇ ನಿಯಮ) ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಪ್ರತಿಯನ್ನು ಲಗತ್ತಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುತ್ತದೆ.

13 .ಪ್ರಮುಖವಾದ ಸೂಚನೆಗಳು:

ಎ) 1)ವೃಂದ/ ಹುದ್ದೆ ಬದಲಾವಣೆಗೆ ಸೇವಾ ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. (ಅಂದರೆ ಪೌರಕಾರ್ಮಿಕ ಹುದ್ದೆಯಿಂದ ಇತರೆ ಗ್ರೂಪ್-ಡಿ / ಸಮನಾಂತರ ಹುದ್ದೆಗಳಿಗೆ ಬದಲಾವಣೆಗೊಳ್ಳಲು ಅವಕಾಶವಿರುವುದಿಲ್ಲ.

2) ಸದರಿ ಹುದ್ದೆಗಳಿಗೆ ಯಾವುದೇ ಸಂದರ್ಶನ ನಿಗಧಿಪಡಿಸಿರುವುದಿಲ್ಲ.

For more job news visit : www.kpscvaani.com

ಬಿ) ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವ ಪ್ರಮಾಣ ಪತ್ರಗಳು

1. ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ದಾಖಲೆಗಳನ್ನು ಅರ್ಜಿ ಸಲ್ಲಿಕೆಗೆ ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಹಾಗೂ ಮೂಲ ದಾಖಲೆಗಳನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.
2. ಅಭ್ಯರ್ಥಿಯು ದೈಹಿಕವಾಗಿ ಆರೋಗ್ಯವಂತ ಮತ್ತು ಸದೃಢಕಾಯರಾಗಿರುವ ಬಗ್ಗೆ ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ಪತ್ರೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ ದೈಹಿಕ ದೃಢತೆಯ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದುಕೊಂಡು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
3. ಜನ್ಮ ದಿನಾಂಕಕ್ಕೆ ಸಂಬಂಧಿಸಿದಂತೆ ದೃಢೀಕರಣಗಳ(PF) ಉದ್ಧೃತ ಭಾಗದ ಮೂಲ ಪ್ರತಿಯನ್ನು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ. (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
5. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳನ್ನು (ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ನಿಗಧಿತ ನಮೂನೆಯಲ್ಲಿ ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
8. ಕಲ್ಯಾಣ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರವನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.
9. ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗಧಿಪಡಿಸಿರುವ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದು ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಸಿ) ಇನ್ನಿತರೆ ಸೂಚನೆಗಳು

1) ಅಪೂರ್ಣ ಅರ್ಜಿಗಳನ್ನು ಹಾಗೂ ಕಡ್ಡಾಯವಾಗಿ ಲಗತ್ತು ಮಾಡಬೇಕಾದ ಮಾಹಿತಿಗಳನ್ನು ಲಗತ್ತಿಸದೇ ಇರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
2) ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಂದ ಪಡೆದ ಸ್ವೀಕೃತಿ ಪತ್ರವನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
3) <u>ದುರ್ನಡತೆ:</u> ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು, ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ: ಹುದ್ದೆಯ ಸಂದರ್ಶನದಿಂದ/ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
4) ಈ ಅಧಿಸೂಚನೆಯ ಪಾಲಿಕೆಯ ಅಧಿಕೃತ ವೆಬ್‌ಸೈಟ್ www.bbmp.gov.in ನಲ್ಲಿ ಪ್ರಚುರಪಡಿಸಲಾಗಿದೆ.
5) ಈ ಅಧಿಸೂಚನೆ ನೇಮಕಾತಿ ಆದೇಶವಲ್ಲ.
6) ಪೌರಕಾರ್ಮಿಕರ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

For more job news visit : www.kpscvaani.com

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಹಾನಗರ ಪಾಲಿಕೆ ಕಛೇರಿಗಳು, ನರಸಿಂಹರಾಜ ಚೌಕ, ಬೆಂಗಳೂರು-560002

ಅಧಿಸೂಚನೆ ಸಂಖ್ಯೆ: ಸ.ಆ(ನೇ&ವಿ)/ಪಿಆರ್/45/2023-24 ದಿನಾಂಕ:14-03-2024

ಅಧಿಸೂಚನೆ

ಪೌರಕಾರ್ಮಿಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಬಗ್ಗೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಘನತ್ಯಾಜ್ಯ ನಿರ್ವಹಣೆ ಹಾಗೂ ವಿವಿಧ ಸ್ವಚ್ಛತಾ ಕಾರ್ಯಗಳ ನಿರ್ವಹಣೆಗಾಗಿ ಘನತ್ಯಾಜ್ಯ ನಿರ್ವಹಣೆ ವಿಭಾಗದಲ್ಲಿ ನೇರಪಾವತಿಯಡಿ (DPS) ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಭರ್ತಿಗಾಗಿ ಸೃಜಿಸಿರುವ 11,307 ಸಂಖ್ಯಾತಿರಿಕ್ತ (Supernumerary posts) ಹುದ್ದೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಇ), ದಿನಾಂಕ: 02-03-2023, ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಭಾ-1), ದಿನಾಂಕ: 28-03-2023 ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ನಅಇ 165 ಬಿಬಿಎಲ್ 2022(ಭಾ-1), ದಿನಾಂಕ: 04-03-2024 ರ ಅನ್ವಯ ಭರ್ತಿ ಮಾಡುವ ಸಲುವಾಗಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಡಿಯಲ್ಲಿನ ತ್ಯಾಜ್ಯ ನಿರ್ವಹಣೆ ಕಾರ್ಯಗಳಲ್ಲಿ ಹಾಲಿ ನೇರಪಾವತಿ ಅಥವಾ ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ (ಪೌರಕಾರ್ಮಿಕರು) ಆಧಾರದ ಮೇಲೆ ಕನಿಷ್ಠ 02 ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ, ಸೇವೆಯನ್ನು ಸಲ್ಲಿಸಿರುವ ಹಾಗೂ ಸದರಿ ನಿಯಮಗಳು ಜಾರಿಗೆ ಬಂದ ದಿನಾಂಕದಿಂದ (ಅಂದರೆ ದಿನಾಂಕ: 02-03-2023) ಕಾರ್ಯ ನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕ್ರಮ ಸಂಖ್ಯೆ	ಇಲಾಖೆ ಮತ್ತು ಹುದ್ದೆಯ ಪದನಾಮ	ಉಳಕೆ ಮೂಲ ವೃಂದದ (RPC) ಹುದ್ದೆಗಳು ಸಂಖ್ಯೆ
01	ಬಿಬಿಎಂಪಿಯಲ್ಲಿ ನೇರಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ 'ಡಿ' ಗ್ರೂಪ್ ಪೌರಕಾರ್ಮಿಕರು	10402

ಸ್ಥಳೀಯ ಮೂಲ ವೃಂದದ ವರ್ಗೀಕೃತ ಮೀಸಲಾತಿ ಹುದ್ದೆಗಳು.

ಕ್ರ. ಸ	ಹುದ್ದೆಯ ಹೆಸರು	ಹುದ್ದೆಗಳ ಸಂಖ್ಯೆ	ವರ್ಗೀಕರಣ								
				ಪ.ಜಾ (17%)	ಪ.ಪಂ (7%)	ಪ್ರ-1 (4%)	ಪ್ರ 2ಎ (15%)	ಪ್ರ 2ಬಿ (4%)	ಪ್ರ 3ಎ (4%)	ಪ್ರ 3ಬಿ (5%)	ಸಾ.ಆ (44%)	ಒಟ್ಟು
01	ಪೌರಕಾರ್ಮಿಕರು (17000-28950)	10402	ಇತರೆ	283	116	66	249	66	66	82	732	1660
			ಮಹಿಳೆ	584	241	138	515	138	138	172	1510	3436
			ಗ್ರಾಮೀಣ	443	182	105	390	105	105	130	1145	2605
			ಅಂಗವಿಕಲ	89	37	21	78	21	21	26	229	522
			ತೃ.ಲಿಂಗ	18	8	4	16	4	4	6	46	106
			ಮಾ.ಸೈ	176	72	41	156	41	41	52	457	1036
			ಕ.ಮಾ.ಅ	88	36	21	78	21	21	26	229	520
			ಯೋ.ನಿರಾ	88	36	20	78	20	20	26	229	517
			ಒಟ್ಟು	1769	728	416	1560	416	416	520	4577	10402

For more job news visit : www.kpscvaani.com

- ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 15-03-2024. (ಬೆಳಗ್ಗೆ 10:00 ಗಂಟೆಗೆ)
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15-04-2024 (ಸಂಜೆ 5:30 ಗಂಟೆಯೊಳಗೆ)
- ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸುವಂತಿಲ್ಲ.
- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು/ಓದಿಸಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಪಾಲಿಕೆಯು ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
- ಅಭ್ಯರ್ಥಿಯು ಅರ್ಜಿಯನ್ನು ಸಂಬಂಧಪಟ್ಟ ಪಾಲಿಕೆಯ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು(ಘನತ್ಯಾಜ್ಯ ನಿರ್ವಹಣೆ) ಕಛೇರಿಯಲ್ಲಿ ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 5:30 ಗಂಟೆಯೊಳಗೆ ಸಲ್ಲಿಸತಕ್ಕದ್ದು(ಸಾರ್ವತ್ರಿಕ ರಜೆಯ ದಿನ ಹೊರತುಪಡಿಸಿ).

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

ಸಾ.ಅ	ಸಾಮಾನ್ಯ ಅಭ್ಯರ್ಥಿ	GM	General Merit
ಪ.ಜಾ	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	CAT-1	Category - 1
2ಎ	ಪ್ರವರ್ಗ-2ಎ	2A	Category - 2A
2ಬಿ	ಪ್ರವರ್ಗ-2ಬಿ	2B	Category - 2B
3ಎ	ಪ್ರವರ್ಗ-3ಎ	3A	Category - 3A
3ಬಿ	ಪ್ರವರ್ಗ-3ಬಿ	3B	Category - 3B
ಮಾ.ಸೈ	ಮಾಜಿ ಸೈನಿಕ	EX -MP	Ex -Military Person
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Candidate
ಅಂ.ವಿ	ಅಂಗವಿಕಲ	PH	Person with bench mark disability
ಯೋ.ನಿರಾ.ಅ	ಯೋಜನೆಯಿಂದ ನಿರಾಶ್ರಿತ ಅಭ್ಯರ್ಥಿ	PDP	Project Displaced Person
ಉ.ಮೂ.ವೃ	ಉಳಿಕೆ ಮೂಲ ವೃಂದ	RPC	Residual Parent Cadre
ಕೆ.ಕೆ	ಕಲ್ಯಾಣ-ಕರ್ನಾಟಕ	KK	Kalyana Karnataka
ತೃ.ಲಿಂಗ	ತೃತೀಯ ಲಿಂಗಗಳು	TG	Transgender

ವಿಶೇಷ ಸೂಚನೆ:

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳುವುದು.
- ಪಾಲಿಕೆಯ ಆಯಾ ವಾರ್ಡಗೆ ಸಂಬಂಧಿಸಿದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಂದ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅದೇ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಮಾತ್ರ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬೇಕು.

For more job news visit : www.kpscvaani.com

1. ನೇಮಕಾತಿ ಷರತ್ತುಗಳು

ಎ) ಅರ್ಹತಾ ಷರತ್ತುಗಳು:–

1. ಭಾರತೀಯ ನಾಗರೀಕನಾಗಿರತಕ್ಕದ್ದು.
2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನೇರಪಾವತಿಯಡಿ (DPS) ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಭರ್ತಿಗಾಗಿ ಸೃಜಿಸಿರುವ 11,307 ಸಂಖ್ಯಾತಿರಿಕ್ತ (Supernumerary posts) ಹುದ್ದೆಗಳನ್ನು ಸರ್ಕಾರದ ಆದೇಶ ಜಾರಿಗೆ ಬಂದ ದಿನಾಂಕದಿಂದ (ಅಂದರೆ 02–03–2023 ರಿಂದ) ಗರಿಷ್ಠ ವಯೋಮಿತಿ 55 ವರ್ಷಗಳು ಮೀರತಕ್ಕದ್ದಲ್ಲ.
3. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ/ ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದಲ್ಲಿ ಎರಡು ವರ್ಷಗಳು ಕಡಿಮೆ ಇಲ್ಲದಂತೆ, ನಿರಂತರವಾಗಿ, ಕೆಲಸ ನಿರ್ವಹಿಸಿರುವ ಹಾಗೂ ಎರಡು ವರ್ಷಗಳಿಗೂ ಮೇಲ್ಪಟ್ಟು ಪಾಲಿಕೆಯಿಂದ ವೇತನ ಪಡೆದ ದಾಖಲಾತಿಗಳನ್ನು ನೇಮಕಾತಿಗೆ ಆದ್ಯತೆ ನೀಡಲಾಗುವುದು.
4. ದೈಹಿಕ ದೃಢತೆ ಇರತಕ್ಕದ್ದು (ಸರ್ಕಾರಿ ಆಸ್ಪತ್ರೆಯ ಸಕ್ಷಮ ಪ್ರಾಧಿಕಾರದಿಂದ ವೈದ್ಯಕೀಯ ಪ್ರಮಾಣ ಪತ್ರ ಪಡೆಯತಕ್ಕದ್ದು) (ವಿಕಲ ಚೇತನರಿಗೆ (PH) ಹೊರತುಪಡಿಸಿ).
5. ಕನ್ನಡ ಭಾಷೆ ಮಾತನಾಡಲು ತಿಳಿದಿರಬೇಕು.
6. ಈ ಹುದ್ದೆಗೆ ಯಾವುದೇ ಶೈಕ್ಷಣಿಕ ವಿದ್ಯಾರ್ಹತೆ ಅಗತ್ಯವಿರುವುದಿಲ್ಲ.

ಬಿ) ಅನರ್ಹತೆ ಷರತ್ತುಗಳು :–

1. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.
2. ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.
3. ಈಗಾಗಲೇ ಗಂಭೀರ ಪ್ರಕರಣದ ಕಾರಣ ಸೇವೆಯಿಂದ ತೆಗೆದುಹಾಕಿರಬಾರದು.

2. ನೇಮಕಾತಿ ವಿಧಾನ:–

1. ನೇಮಕಾತಿಗೆ ಅರ್ಹರಾಗುವ ಅಭ್ಯರ್ಥಿಗಳ ಅರ್ಹತೆಗೆ ಅನುಗುಣವಾಗಿ ಅಂದರೆ ನೇರಪಾವತಿ / ಕ್ಷೇಮಾಭಿವೃದ್ಧಿ / ದಿನಗೂಲಿ ಆಧಾರದ ಮೇಲೆ ಸಲ್ಲಿಸಿದ ಸೇವಾವಧಿಯನ್ನು ಪರಿಗಣಿಸಿ ಚಾಲ್ತಿಯಲ್ಲಿರುವ ಮೀಸಲಾತಿ ನೀತಿಗೊಳಪಟ್ಟು ಅರ್ಹತೆ ಪಟ್ಟಿಯನ್ನು ತಯಾರಿಸಲಾಗುವುದು.
2. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಪೈಕಿ ಎರಡು ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಬೇಕು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು.
3. ಸಮತಳ ಮೀಸಲಾತಿಯಡಿ ಕನ್ನಡ ಮಾಧ್ಯಮ, ಗ್ರಾಮೀಣ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆಂದು ಮೀಸಲಾದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ, ಉಳಿದ ಅರ್ಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.
4. ಅರ್ಹ ಸಾಮಾನ್ಯ ವರ್ಗ, ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.
5. ನೇರಪಾವತಿಯಡಿ (DPS) ಎರಡು ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಿ ಪರಿಗಣಿಸಲಾಗುವುದು.
6. ಮೇಲಿನ ಮಾನದಂಡಗಳನ್ವಯ ಅರ್ಹ ಅಭ್ಯರ್ಥಿಗಳ ಮುಖ್ಯ ಪಟ್ಟಿಯನ್ನು ತಯಾರಿಸಲಾಗುವುದು.
7. ಅರ್ಹ ಅಭ್ಯರ್ಥಿಗಳ ಅಂತಿಮ ಮುಖ್ಯ ಪಟ್ಟಿಯನ್ನು ಪಾಲಿಕೆಯ ಮುಖ್ಯ ಆಯುಕ್ತರ ಕಛೇರಿಯ ಸೂಚನಾ ಫಲಕದಲ್ಲಿ, ಎಲ್ಲಾ ವಲಯ ಕಛೇರಿಗಳಲ್ಲಿ ಹಾಗೂ ಪಾಲಿಕೆಯ ಜಾಲತಾಣದಲ್ಲಿ (WEBSITE) ಪ್ರಕಟಿಸಲಾಗುವುದು.
8. ಆಯ್ಕೆಯಾಗಿರುವ ಅಭ್ಯರ್ಥಿಗೆ ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಆದೇ ಪ್ರವರ್ಗದ ಮೀಸಲಾತಿಯ ಹೆಚ್ಚುವರಿ ಪಟ್ಟಿಯಲ್ಲಿರುವ ಮತ್ತೊಬ್ಬ ಅಭ್ಯರ್ಥಿಯನ್ನು ನೇಮಕಾತಿಗಾಗಿ ಪರಿಗಣಿಸಲು ಕ್ರಮವಹಿಸಲಾಗುವುದು.

For more job news visit : www.kpscvaani.com

2. ಜನ್ಮ ದಿನಾಂಕ ದಾಖಲಾತಿಗೆ ಸಂಬಂಧಿಸಿದಂತೆ:–

ಅಭ್ಯರ್ಥಿಗಳ ಭವಿಷ್ಯ ನಿಧಿ ಖಾತೆಯಲ್ಲಿ ನಮೂದಿಸಲಾದ ಜನ್ಮ ದಿನಾಂಕದ ದಾಖಲಾತಿಗಳನ್ನು ಪರಿಗಣಿಸಲಾಗುವುದು.

3. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:–

(ಅ) ಶೈಕ್ಷಣಿಕ ವಿದ್ಯಾರ್ಹತೆ ನಿಗಧಿ ಪಡಿಸಿರುವುದಿಲ್ಲ.
(ಆ) ಕನ್ನಡ ಭಾಷೆ ಮಾತನಾಡಲು ತಿಳಿದಿರಬೇಕು.
(ಇ) ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ. (ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಭವಿಷ್ಯನಿಧಿಯಲ್ಲಿ ದಾಖಲಾದ ಮಾಹಿತಿಯಂತೆ ಅಥವಾ ಅಭ್ಯರ್ಥಿಗಳ ಶೈಕ್ಷಣಿಕ ದಾಖಲಾತಿಗಳನ್ನು ಪರಿಗಣಿಸಲಾಗುವುದು).

5. ಮೀಸಲಾತಿ ಪ್ರಮಾಣ ಪತ್ರಗಳು:

ಜಾತಿ ಮೀಸಲಾತಿ ಕೋರಬಯಸುವವರು

(ಅ)ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ

(ಆ)ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ ಹಾಗೂ

(ಇ) 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಹುದ್ದೆಗಳಿಗಾಗಿ ಆಯ್ಕೆ ಹೊಂದುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಜಾತಿ ಮೀಸಲಾತಿ ಪ್ರಮಾಣ ಪತ್ರಗಳನ್ನು ಆಯಾ ನೇಮಕಾತಿ ಪ್ರಾಧಿಕಾರದವರು ಅವುಗಳ ಸಿಂಧುತ್ವದ ಪರಿಶೀಲನೆಗೆ ಒಳಪಟ್ಟಂತೆ ನೇಮಕಾತಿಗೆ ಬದ್ಧರಾಗಿರುತ್ತಾರೆ. ಅಧಿಸೂಚನೆಯ ಕೊನೆಯಲ್ಲಿ ಪ್ರಮಾಣ ಪತ್ರಗಳ ನಮೂನೆಯನ್ನು ನೀಡಲಾಗಿರುತ್ತದೆ.

6.ಮಾಜಿ ಸೈನಿಕ:

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್ಆರ್ಆರ್ 92 ದಿನಾಂಕ01–04–1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್ಆರ್ಆರ್ 95 ದಿನಾಂಕ 21–10–1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್, ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

For more job news visit : www.kpscvaani.com

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

1. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

7.ಗ್ರಾಮೀಣ ಅಭ್ಯರ್ಥಿ

ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ) ನಿಗಧಿತ ನಮೂನೆ-2 ರಲ್ಲಿ ಪ್ರಮಾಣ ಪತ್ರವನ್ನು ಪಡೆದು ಲಗತ್ತಿಸಿರಬೇಕು.

೮. ಕನ್ನಡ ಮಾಧ್ಯಮ ಅಭ್ಯರ್ಥಿ

ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ್ದಲ್ಲಿ ಪ್ರಮಾಣ ಪತ್ರ (ಅಭ್ಯರ್ಥಿಯು ಮೀಸಲಾತಿ ಕೋರಿದ್ದಲ್ಲಿ) ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಲಗತ್ತಿಸಿರಬೇಕು.

೯. ಅಂಗವಿಕಲ/ವಿಕಲಚೇತನ ಅಭ್ಯರ್ಥಿಗಳು:

<u>ಅಂಗವಿಕಲ ಅಭ್ಯರ್ಥಿ ಎಂದರೆ:</u>

(ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿಉತ್ತಮವಾದ ಕಣ್ಣಿನಲ್ಲಿ 6:60 ದೃಷ್ಟಿ ಸಾಮಾರ್ಥ್ಯ ಇರುವ ವ್ಯಕ್ತಿ.

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಈ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರೀಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಉ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಊ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

(ಋ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜ್‌ನ್) ರಿಂದ ದೈಹಿಕ ಅಂಗವಿಕಲತೆಯ ಮೌಲಿಕರಣವನ್ನು ಅಲ್ಮಿಕೊ ಕಾನ್‌ಪುರ್ (ಡಬ್ಲ್ಯೂ.ಎಚ್.ಒ.ಸ್ಟ್ಯಾಂಡರ್ಡ) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

For more job news visit : www.kpscvaani.com

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿ:19-11-2005 ರಲ್ಲಿ ನಿಗಧಿಪಡಿಸಿರುವ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಸರ್ಕಾರದ ಆದೇಶ ಸಂಖ್ಯೆ:WCD 118 PHP 2020, Bengaluru, dt:13-01-2022 ರಂತೆ ಅಂಗವಿಕಲ ಅಭ್ಯರ್ಥಿಗಳಿಗೆ ಪಾಲಿಕೆಯಲ್ಲಿ ಹುದ್ದೆಗಳನ್ನು ಭರ್ತಿ ಮಾಡುವಾಗ ನಿಗಧಿಪಡಿಸಿರುವಂತೆ ಪರಿಗಣಿಸಲಾಗುವುದು. ಅನ್ವಯವಾಗುವ ಅಂಗವಿಕಲ/ವಿಕಲಚೇತನ ಪ್ರಮಾಣ ಪತ್ರದ ಪ್ರತಿಯನ್ನು ಅಥವಾ UDID ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಲಗತ್ತಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

10. ತೃತೀಯ ಲಿಂಗಗಳ ಮೀಸಲಾತಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸೇನೆನಿ 2020 ದಿನಾಂಕ: 14-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ 'ಎ' 'ಬಿ' 'ಸಿ' ಹಾಗೂ 'ಡಿ' ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1(ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗಧಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಲಗತ್ತಿಸಬೇಕು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

11. ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಗಳು

ಸರ್ಕಾರಿ ಆದೇಶ ಸಂಖ್ಯೆ; ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಶೇ.5% ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99 ದಿನಾಂಕ: 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಅಂದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

12 .ಪ್ರಮುಖವಾದ ಸೂಚನೆಗಳು:

ಎ) 1) ವೃಂದ/ ಹುದ್ದೆ ಬದಲಾವಣೆಗೆ ಸೇವಾ ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. (ಅಂದರೆ ಪೌರಕಾರ್ಮಿಕ ಹುದ್ದೆಯಿಂದ ಇತರೆ ಗ್ರೂಪ್-ಡಿ / ಸಮನಾಂತರ ಹುದ್ದೆಗಳಿಗೆ ಬದಲಾವಣೆಗೊಳ್ಳಲು ಅವಕಾಶವಿರುವುದಿಲ್ಲ.

2) ಸದರಿ ಹುದ್ದೆಗಳಿಗೆ ಯಾವುದೇ ಸಂದರ್ಶನ ನಿಗಧಿಪಡಿಸಿರುವುದಿಲ್ಲ.

ಬಿ) ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವ ಪ್ರಮಾಣ ಪತ್ರಗಳು

1. ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ದಾಖಲೆಗಳನ್ನು ಅರ್ಜಿ ಸಲ್ಲಿಕೆಗೆ ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಹಾಗೂ ಮೂಲ ದಾಖಲೆಗಳನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.
2. ಅಭ್ಯರ್ಥಿಯು ದೈಹಿಕವಾಗಿ ಆರೋಗ್ಯವಂತ ಮತ್ತು ಸದೃಢಕಾಯರಾಗಿರುವ ಬಗ್ಗೆ ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ಪತ್ರೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ ದೈಹಿಕ ದೃಢತೆಯ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದುಕೊಂಡು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

For more job news visit : www.kpscvaani.com

3. ಜನ್ಮ ದಿನಾಂಕಕ್ಕೆ ಸಂಬಂಧಿಸಿದಂತೆ ದೃಢೀಕರಣಗಳ(PF) ಉದ್ಧೃತ ಭಾಗದ ಮೂಲ ಪ್ರತಿಯನ್ನು ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ. (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
5. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳನ್ನು (ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ನಿಗಧಿತ ನಮೂನೆಯಲ್ಲಿ ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) ದಾಖಲೆಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
8. ಕಲ್ಯಾಣ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರವನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.
9. ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗಧಿಪಡಿಸಿರುವ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದು ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಸಿ) ಇನ್ನಿತರೆ ಸೂಚನೆಗಳು

1) ಅಪೂರ್ಣ ಅರ್ಜಿಗಳನ್ನು ಹಾಗೂ ಕಡ್ಡಾಯವಾಗಿ ಲಗತ್ತು ಮಾಡಬೇಕಾದ ಮಾಹಿತಿಗಳನ್ನು ಲಗತ್ತಿಸದೇ ಇರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
2) ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಂದ ಪಡೆದ ಸ್ವೀಕೃತಿ ಪತ್ರವನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
3) <u>ದುರ್ನಡತೆ:</u> ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು, ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ: ಹುದ್ದೆಯ ಸಂದರ್ಶನದಿಂದ/ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
4) **ಈ ಅಧಿಸೂಚನೆಯ ಪಾಲಿಕೆಯ ಅಧಿಕೃತ ವೆಬ್‌ಸೈಟ್** www.bbmp.gov.in **ನಲ್ಲಿ ಪ್ರಚುರಪಡಿಸಲಾಗಿದೆ.**
5) **ಈ ಅಧಿಸೂಚನೆ ನೇಮಕಾತಿ ಆದೇಶವಲ್ಲ.**
6) **ಪೌರಕಾರ್ಮಿಕರ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ.**

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ